**ಸಾಕ್ಷಿಗೆ ದಿನಾಂಕಃ 9.02.2026 ರಂದು ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲು ಆರೋಪಿ ಪರ ವಕೀಲರಿಂದಃಃ**

ನ ರಾ ಪುರ ಪೊಲೀಸ್ ಠಾಣೆಯಿಂದ ಸುಮಾರು 300 ಮೀ ದೂರದಲ್ಲಿ ಆರೋಪಿತರ ಹಿಟ್ಟಿನ ಗಿರಣಿ ಮತ್ತು ಅಕ್ಕಿ ಅಂಗಡಿಯನ್ನು ಹೊಂದಿದ್ದಾರೆ ಎಂದರೆ ಸರಿ. ನಾವು ಆರೋಪಿತರ ಅಂಗಡಿಗೆ ದಾಳಿ ಮಾಡಲು ಹೋದಂತಹ ಸಂದರ್ಭದಲ್ಲಿ ಫುಡ್ ಇನ್ಸ್ಪೆಕ್ಟರ್ ನಮ್ಮ ಠಾಣೆಗೆ ದೂರು ನೀಡಿರಲಿಲ್ಲ. ಆರೋಪಿತರ ಅಂಗಡಿಗೆ ನಾವು ದಾಳಿ ಮಾಡುವ ಸಂದರ್ಭದಲ್ಲಿ ಆರೋಪಿತರ ಅಂಗಡಿಯಲ್ಲಿ ಪಡಿತರ ಅಕ್ಕಿ ದಾಸ್ತಾನು ಆಗಿರುತ್ತದೆ ಎಂದು ಯಾವುದೇ ದಾಖಲೆಗಳು ನಮ್ಮ ಬಳಿ ಇರಲಿಲ್ಲ ಎಂದರೆ ಸರಿ. ಸಾಕ್ಷಿ ಮುಂದುವರೆದು ಕಳ್ಳತನದ ಅಕ್ಕಿ ಎಂದು ನಮಗೆ ಮಾಹಿತಿ ಬಂದಿತ್ತು ಎಂದು ನುಡಿಯುತ್ತಾರೆ. ಯಾರ ಅಕ್ಕಿಯನ್ನು ಕಳ್ಳತನ ಮಾಡಿದ್ದಾರೆ ಎಂಬ ಬಗ್ಗೆ ನಮಗೆ ನಿರ್ದಿಷ್ಟವಾಗಿ ಮಾಹಿತಿ ಬಂದಿರಲಿಲ್ಲ ಎಂದರೆ ಸರಿ. ಆರೋಪಿತರ ಅಂಗಡಿಯ ಮೇಲೆ ದಾಳಿ ಮಾಡುವ ಪೂರ್ವದಲ್ಲಿ ನಾನು ಯಾವುದೇ ಪ್ರಾಥಮಿಕ ತನಿಖೆ ಮಾಡಿರುವುದಿಲ್ಲ ಎಂದರೆ ಸರಿ. ಆರೋಪಿತರು ಬಹಳ ವರ್ಷಗಳಿಂದ ಮತ್ತು ಪ್ರಸ್ತುತ ಸದರಿ ಅಕ್ಕಿ ವ್ಯಾಪಾರ ಮತ್ತು ಹಿಟ್ಟಿನ ಗಿರಣಿಯನ್ನು ಅದೇ ಅಂಗಡಿಯಲ್ಲಿ ನಡೆಸುತ್ತಿದ್ದಾರೆ ಎಂದರೆ ಸರಿ.

ನಾನು ಆರೋಪಿತರ ಅಂಗಡಿಯಲ್ಲಿ ದೊರೆತ ಅಕ್ಕಿಯನ್ನು ಅಮಾನತುಪಡಿಸಿಕೊಳ್ಳುವ ಪೂರ್ವದಲ್ಲಿ ಸದರಿ ಅಕ್ಕಿ ಪಡಿತರ ಅಕ್ಕಿಯೇ ಎಂಬ ಬಗ್ಗೆ ತನಿಖೆ ಮಾಡಿರುವುದಿಲ್ಲ. ಸಾಕ್ಷಿ ಮುಂದುವರೆದು ಚಾಸಾ-1 ರವರು ಈ ಬಗ್ಗೆ ನಮಗೆ ಪಡಿತರ ಅಕ್ಕಿ ಆರೋಪಿತರ ಅಂಗಡಿಯಲ್ಲಿದೆ ಎಂದು ಪರಿಶೀಲಿಸಿ ಮಾಹಿತಿ ನೀಡಿದರು ಎಂದು ನುಡಿಯುತ್ತಾರೆ. ಸದರಿ ವಿಚಾರವನ್ನು ನಿಪಿ-1 ರಲ್ಲಿ ನಮೂದು ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ನನ್ನ ತನಿಖಾ ಕಾಲದಲ್ಲಿ ಆರೋಪಿತರು ಯಾರ ಬಳಿಯಿಂದ ಸದರಿ ಅಕ್ಕಿಯನ್ನು ಪಡೆದಿದ್ದರು ಎಂಬ ಬಗ್ಗೆ ಸಾಕ್ಷ್ಯಾಧಾರಗಳನ್ನು ಅಂತಿಮ ವರದಿಯಲ್ಲಿ ಸಲ್ಲಿಸಿರುವುದಿಲ್ಲ ಎಂದರೆ ಸರಿ. ಆರೋಪಿತರು ಯಾವ ಪಡಿತರ ಅಂಗಡಿಗಳಿಂದ ಮತ್ತು ವ್ಯವಸಾಯ ಸಂಘಗಳಿಂದ ಪಡಿತರ ಅಕ್ಕಿಯನ್ನು ಅಕ್ರಮವಾಗಿ ಪಡೆದುಕೊಂಡು ದಸ್ತಾನು ಮಾಡಿಕೊಂಡಿದ್ದರು ಎಂಬ ಬಗ್ಗೆ ತನಿಖೆ ಮಾಡಿದ್ದೀರಾ ಎಂದರೆ ಸಾಕ್ಷಿಯು ಈ ಬಗ್ಗೆ ನಾನು ಪತ್ರ ವ್ಯವಹಾರ ಮಾಡಿದ್ದು, ಸದರಿ ಪಡಿತರ ಅಂಗಡಿಗಳ ಮಾಲೀಕರು ಮತ್ತು ವ್ಯವಸಾಯ

ಸಂಘ ಸಂಸ್ಥೆಗಳ ಅಧಿಕಾರಿಗಳು ತಮ್ಮ ಬಳಿ ಇದ್ದ ಯಾವುದೇ ಅಕ್ಕಿ ಕಳ್ಳತನವಾಗಿಲ್ಲ ಮತ್ತು ತಾವು ಅಕ್ರಮವಾಗಿ ಯಾರಿಗೂ ಅಕ್ಕಿಯನ್ನು ನೀಡಿರುವುದಿಲ್ಲ ಎಂದು ತಿಳಿಸಿರುತ್ತಾರೆ ಎಂದು ನುಡಿಯುತ್ತಾರೆ. ಆರೋಪಿತರು ಯಾವುದೇ ಅಕ್ಕಿಯನ್ನು ಕಳ್ಳತನ ಮಾಡಿರದ ಕಾರಣ ಅಂತಿಮ ವರದಿಯಲ್ಲಿ ಭಾರತೀಯ ದಂಡ ಸಂಹಿತೆ ಕಲಂ 371 ನ್ನು ಕೈಬಿಡಲಾಗಿದೆ ಎಂದರೆ ಸರಿ. ಆರೋಪಿತರು ರೈತರಿಂದ ನೇರವಾಗಿ ಭತ್ತ ಮತ್ತು ಅಕ್ಕಿಯನ್ನು ಖರೀದಿ ಮಾಡಿರುವ ಬಗ್ಗೆ ತನಿಖೆ ಮಾಡಿದ್ದೀರಾ ಎಂದರೆ ಸಾಕ್ಷಿಯು ಈ ಬಗ್ಗೆ ತನಿಖೆ ಮಾಡಿರುವುದಿಲ್ಲ ಎಂದು ನುಡಿಯುತ್ತಾರೆ.  ಆರೋಪಿತರು ರೈತರಿಂದ ಖರೀದಿ ಮಾಡಿದ ಭತ್ತ ಮತ್ತು ಅಕ್ಕಿಯನ್ನು ತಮ್ಮ ಅಂಗಡಿಯಲ್ಲಿ ಇಟ್ಟುಕೊಂಡಿದ್ದರು ಎಂದರೆ ಸರಿಯಲ್ಲ. ಆರೋಪಿತರ ಅಂಗಡಿಯಲ್ಲಿ ದೊರೆತ ಅಕ್ಕಿ ಪಡಿತರ ಅಕ್ಕಿ ಎಂಬುದನ್ನು ಸಾಬೀತುಪಡಿಸಲು ಯಾವುದೇ ಎಫ್ ಎಸ್ ಎಲ್ ವರದಿ ನೀಡಿರುವುದಿಲ್ಲ ಎಂದರೆ ಸರಿಯಲ್ಲ.

ಪಂಚಾಯಿತಿ ವ್ಯಾಪ್ತಿಯಲ್ಲಿ ಅಂಗಡಿ ವ್ಯಾಪಾರವನ್ನು ನಡೆಸಬೇಕಾದರೆ ಅವರಿಂದ ಪರವಾನಗಿ ಪಡೆಯಬೇಕಾಗುತ್ತದೆ ಎಂದರೆ ಸರಿ. ದಿನಸಿ ಅಂಗಡಿಯಲ್ಲಿ ವ್ಯಾಪಾರ ಮಾಡುವ ವ್ಯಾಪಾರಸ್ಥರು ಹೆಚ್ಚು ದಾಸ್ತಾನು ಇಟ್ಟುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿತರು ಅಕ್ಕಿ ವ್ಯಾಪಾರವನ್ನು ಮಾಡಲು ಸಹ ಪರವಾನಗಿ ಹೊಂದಿದ್ದರು ಎಂದರೆ ಸರಿಯಲ್ಲ. ನಾನು ಆರೋಪಿತರ ಅಂಗಡಿಯಲ್ಲಿ ಜಪ್ತಿ ಮಾಡಿದ ಅಕ್ಕಿಯನ್ನು ಜಿಲ್ಲಾಧಿಕಾರಿಗಳಿಗೆ ಸ್ವೀಕರಿಸಲು ಮನವಿ ಪತ್ರ ನೀಡಿದ್ದೆ ಎಂದರೆ ಸರಿ. ಆರೋಪಿತರು ಸದರಿ ಅಕ್ಕಿಯನ್ನು ದಾಸ್ತಾನು ಇಟ್ಟುಕೊಳ್ಳಲು ಪರವಾನಗಿಯನ್ನು ಪಡೆದಿದ್ದರು ಹಾಗಾಗಿ ಸದರಿ ಅಕ್ಕಿಯನ್ನು ತಮಗೆ ಹಿಂದಿರುಗಿಸಬೇಕೆಂದು ಜಿಲ್ಲಾಧಿಕಾರಿಗಳ ಸಮಕ್ಷಮ ಅರ್ಜಿ ಸಲ್ಲಿಸಿ ನನ್ನನ್ನು ಸಹ ಪಕ್ಷಕಾರನ್ನಾಗಿ ಮಾಡಿದ್ದರು ಎಂದರೆ ಸರಿಯಲ್ಲ. ಜಿಲ್ಲಾಧಿಕಾರಿಗಳ ಆದೇಶದ ಅನ್ವಯ ಜಪ್ತಿ ಮಾಡಿಕೊಂಡ ಅಕ್ಕಿಯನ್ನು ನ ರಾ ಪುರ ಪೊಲೀಸರು ಆರೋಪಿತರಿಗೆ ಹಿಂದಿರುಗಿಸಿದ್ದಾರೆ ಎಂದರೆ ಸಾಕ್ಷಿಯು ನನ್ನ ತನಿಖಾ ಕಾಲದಲ್ಲಿ ಆಗಿರುವುದಿಲ್ಲ ಎಂದು ನುಡಿಯುತ್ತಾರೆ. ನಾನು ಆರೋಪಿತರ ವಿರುದ್ಧ ಸುಳ್ಳು ಪ್ರಕರಣವನ್ನು ದಾಖಲಿಸಿ ಸುಳ್ಳು ತನಿಖೆಯನ್ನು ಮಾಡಿರುತ್ತೇನೆಂದರೆ ಸರಿಯಲ್ಲ. ಆರೋಪಿತರು ತಮ್ಮ ಅಂಗಡಿಗೆ ಲಾರಿಗಳ ಮುಖಾಂತರ ಬರುತ್ತಿದ್ದ ದಾಸ್ತಾನುಗಳನ್ನು ಶೇಖರಿಸಿಕೊಳ್ಳುವ ಸಂದರ್ಭದಲ್ಲಿ ರಸ್ತೆಯಲ್ಲಿ ಟ್ರಾಫಿಕ್ ಉಂಟಾಗುತ್ತಿದ್ದರಿಂದ ನನಗೂ ಮತ್ತು ಆರೋಪಿತರಿಗೂ ಮಾತುಕತೆಯಾಗಿತ್ತು

ಮತ್ತು ಸದರಿ ವಿಚಾರವನ್ನು ನಾನು ಮನಸ್ಸಿನಲ್ಲಿಟ್ಟುಕೊಂಡು ಸುಳ್ಳು ಪ್ರಕರಣವನ್ನು ಆರೋಪಿತರ ವಿರುದ್ಧ ದಾಖಲು ಮಾಡಿರುತ್ತೇನೆಂದರೆ ಸರಿಯಲ್ಲ. ನಾನು ಮತ್ತು ಚಾಸಾ-1 ರವರು ಶರಿಕ್ ಆಗಿ ಆರೋಪಿತರ ವಿರುದ್ಧ ಸುಳ್ಳು ಪ್ರಕರಣ ದಾಖಲಿಸಿರುತ್ತೇನೆಂದರೆ ಸರಿಯಲ್ಲ. ನಾನು ಯಾವುದೇ ಮಹಜರನ್ನು ಸ್ಥಳದಲ್ಲಿ ಮಾಡಿರುವುದಿಲ್ಲ ಮತ್ತು ನಿಪಿ-1 ನ್ನು ಪೊಲೀಸ್ ಠಾಣೆಯಲ್ಲಿ ಕುಳಿತು ದಾಖಲಿಸಿರುತ್ತೇನೆಂದರೆ ಸರಿಯಲ್ಲ. ನಾನು ಈ ಪ್ರಕರಣದಲ್ಲಿ ಯಾವುದೇ ಸಾಕ್ಷಿದಾರರ ಹೇಳಿಕೆಗಳನ್ನು ದಾಖಲು ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ನಾನು ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಃಃ ಮರು ವಿಚಾರಣೆ ಇಲ್ಲಃಃ**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)**

ಓ ಹೇ ಕೇ ಸ ಇ ಎ ಓ

ಪ್ರ.ದ.ನ್ಯಾದಂಃ ನ.ರಾ.ಪುರ.

ಸಾಕ್ಷಿ ಸಹಿಃ